<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 126 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಸರ್ಕಾರ ಮೆಡಿಕಲ್ ಎಮರ್ಜೆನ್ಸಿ ಹಾಗೂ ಇ-ಶ್ರಮ ಕಾರ್ಡ್ ಫಲಾನುಭವಿಗಳಿಗೆ ಆದ್ಯತೆ ಮೇರೆಗೆ ರೇಷನ್ ಕಾರ್ಡ್‌ಗಳನ್ನು ವಿತರಿಸುತ್ತಿದೆಯೇ; (ವಿವರ ನೀಡುವುದು)</td><td>ಹೌದು.<br>ವೈದ್ಯಕೀಯ ತುರ್ತು ಪರಿಸ್ಥಿತಿ ಇರುವ ಅರ್ಹರಿಗೆ PVTG's ರಡಿ ಬರುವ ಬುಡಕಟ್ಟು ಸಮುದಾಯದವರಿಗೆ ಹಾಗೂ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲು ಕ್ರಮವಹಿಸಲಾಗಿರುತ್ತದೆ.</td></tr>
<tr><td>ಆ</td><td>ಹೊಸ ರೇಷನ್ ಕಾರ್ಡ್‌ಗಳನ್ನು ನೀಡದಿರುವುದರಿಂದ ಅರ್ಹ ಬಡವರು ಹಾಗೂ ಮಧ್ಯಮ ವರ್ಗದ ಕುಟುಂಬಗಳು, ವಿಭಕ್ತ ಕುಟುಂಬಗಳು ಸರ್ಕಾರದ ಅನೇಕ ಜನಪರ ಯೋಜನೆಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು;</td><td>ಸರ್ಕಾರದ ಆದೇಶ ಸಂಖ್ಯೆ ಆನಾಸ 211 ಡಿಆರ್‌ಎ 2021, ದಿನಾಂಕ:29.09.2023 ರನ್ವಯ ಸೆಪ್ಟೆಂಬರ್ 2023 ರ ವರೆವಿಗೂ ಸಲ್ಲಿಸಲಾಗಿದ್ದ 2,95,986 ಅರ್ಜಿಗಳ ವಿಲೇವಾರಿಗೆ ಅನುಮತಿಯನ್ನು ನೀಡಲಾಗಿರುತ್ತದೆ. ಇದರಲ್ಲಿ 1,99,410 ಅರ್ಜಿಗಳನ್ನು ಅನುಮೋದಿಸಲಾಗಿರುತ್ತದೆ.<br>ಅಲ್ಲದೆ ವೈದ್ಯಕೀಯ ತುರ್ತುಪರಿಸ್ಥಿತಿ ಹಿನ್ನೆಲೆ ಇರುವವರಿಗೆ, PVTG's, ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.</td></tr>
<tr><td>ಇ</td><td>ಉತ್ತರ ಕನ್ನಡ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಪಡಿತರ ಚೀಟಿಗಾಗಿ ಸ್ವೀಕೃತವಾಗಿರುವ ಅರ್ಜಿಗಳು ಮತ್ತು ವಿತರಿಸಿದ ಮತ್ತು ಬಾಕಿ ಇರುವ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಉತ್ತರ ಕನ್ನಡ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಪಡಿತರ ಚೀಟಿಗಾಗಿ ಸ್ವೀಕೃತವಾಗಿರುವ ಅರ್ಜಿಗಳು ಮತ್ತು ವಿತರಿಸಿದ ಮತ್ತು ಬಾಕಿ ಇರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತೆ ಇರುತ್ತದೆ.
<table>
<tr><th>ಜಿಲ್ಲೆ</th><th>ಸ್ವೀಕೃತವಾದ ಅರ್ಜಿಗಳು</th><th>ಅನುಮೋದಿಸಿದ ಅರ್ಜಿಗಳು</th><th>ತಿರಸ್ಕೃತ ಅರ್ಜಿಗಳು</th><th>ಬಾಕಿ ಇರುವ ಅರ್ಜಿಗಳು</th></tr>
<tr><td>ಉತ್ತರಕನ್ನಡ</td><td>81,488</td><td>64,840</td><td>14,942</td><td>1,760</td></tr>
<tr><td>ಬೆಳಗಾವಿ</td><td>4,23,229</td><td>2,92,953</td><td>90,779</td><td>39,497</td></tr>
</table>
</td></tr>
</table>

ಇ-ಆನಾಸ 190 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು